ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

**ದೂ: 080-22343904/05**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು,
ದಿನಾಂಕ: 31.05.2018

ಸಂಖ್ಯೆ:ಕಾಶಿಇ:ಶೈವಿ:40:ವಿ.ಪ.ದಿನ:2018-19

# ಸುತ್ತೋಲೆ

ವಿಷಯ: ಕಾಲೇಜುಗಳಲ್ಲಿ ಜೂನ್ 5 ರಂದು ವಿಶ್ವ ಪರಿಸರ ದಿನಾಚರಣೆ ಆಚರಿಸುವ ಕುರಿತು.

ಉಲ್ಲೇಖ:
1. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳ ಟಿಪ್ಪಣಿ ಸಂಖ್ಯೆ: Pscm/488/2018 dt: 12.03.2018.
2. ಸರ್ಕಾರದ ಪತ್ರ ಸಂಖ್ಯೆ: ಇಡಿ 44 ವಿವಿಧ 2018 ಬೆಂಗಳೂರು, ದಿನಾಂಕ:26.04.2018.
3. ಸರ್ಕಾರದ ಪತ್ರ ಸಂಖ್ಯೆ:ಅಪಜೀ 03 ಇಎನ್‌ಜಿ 2018 ಬೆಂಗಳೂರು ದಿನಾಂಕ:17.05.2018 & 19.05.2018.
4. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/22/ಸುತ್ತೋಲೆ/2018-19 ಪತ್ರ ದಿನಾಂಕ: 18.05.2018.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 5ನೇ ಜೂನ್ 2018 ರಂದು "ವಿಶ್ವ ಪರಿಸರ" ದಿನಾಚರಣೆ ಪ್ರಯುಕ್ತ ಕೈಗೊಳ್ಳಬೇಕಾಗಿರುವ ಕಾರ್ಯಕ್ರಮಗಳ ಕುರಿತು ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳ ಉಲ್ಲೇಖಿತ ದಿನಾಂಕ:12.03.2018ರ ಟಿಪ್ಪಣಿ ಮತ್ತು ಅದರ ಅಡಕಗಳ ಪ್ರತಿಯನ್ನು ಲಗತ್ತಿಸಿ, ಸದರಿ ಅಡಕದಲ್ಲಿ ಮಾನ್ಯ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವರ ದಿನಾಂಕ:28.02.2018ರ ಪತ್ರದಲ್ಲಿ ಪ್ರಸ್ತಾಪಿಸಿರುವಂತೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಈಗಾಗಲೇ ಉಲ್ಲೇಖಿತ (3)ರ ಈ ಕಛೇರಿಯ ಸುತ್ತೋಲೆಯಲ್ಲಿ ಸೂಚಿಸಲಾಗಿರುತ್ತದೆ.

ಈ ಸಂಬಂಧ 5ನೇ ಜೂನ್ 2018 ರಂದು "ವಿಶ್ವ ಪರಿಸರ" ದಿನಾಚರಣೆಯ ಪ್ರಯುಕ್ತ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಗಿಡ ನೆಡುವ ಕಾರ್ಯಕ್ರಮ, ಪರಿಸರ ಜಾಥಾ, ಪ್ರಭಾತ್ ಫೇರಿ, ಸಾಂಸ್ಕೃತಿಕ ಕಾರ್ಯಕ್ರಮ, ಪ್ಲಾಸ್ಟಿಕ್ ನಿಷೇಧ ಹಾಗೂ ಪ್ಲಾಸ್ಟಿಕ್‌ನಿಂದ ಆಗುವ ಪರಿಸರ ಮಾಲಿನ್ಯದ ಕುರಿತು ಅರಿವು ಮೂಡಿಸುವ ಬಗ್ಗೆ ಹಮ್ಮಿಕೊಂಡಿರುವ ಪ್ರಬಂಧ ಸ್ಪರ್ಧೆಯಂತಹ ಕಾರ್ಯಕ್ರಮಗಳ ಸಮಗ್ರ ವರದಿಯನ್ನು ಈ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

Web-site
D.f.

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ:
1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ ಮಂಗಳೂರು, ಧಾರವಾಡ, ಕಲಬುರಗಿ. - ಸೂಕ್ತ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಸಂಬಂಧಿಸಿದ ಜಂಟಿ ನಿರ್ದೇಶಕರ ಮೂಲಕ)
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆಗೆ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು - 01.
4. ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
5. ಕಛೇರಿ ಪ್ರತಿ.